# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 507 |
| ಮಾನ್ಯ ಸದಸ್ಯರ ಹೆಸರು | ಡಾ: ತಳವಾರ್ ಸಾಬಣ್ಣ(ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 08.12.2023 |
| ಉತ್ತರಿಸುವ ಸಚಿವರು | ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ, ಯುವ ಸಬಲೀಕರಣ ಹಾಗೂ ಕ್ರೀಡಾ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಟೋಕೆ ಕೋಳಿ ಮತ್ತು ಡೋರ ಕೋಳಿ ಸಮುದಾಯವನ್ನು 1956 ರಿಂದ ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಕೇಂದ್ರ ಸರ್ಕಾರವು ಸೇರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಕರ್ನಾಟಕ ರಾಜ್ಯದ ಪರಿಶಿಷ್ಟಗಳ ಪಟ್ಟಿಯಲ್ಲಿ ಕ್ರಮಸಂಖ್ಯೆ:22ರಲ್ಲಿ Koli dhor, Tokre koli, Kolcha, Kolgha ಮಾತ್ರ ಇರುತ್ತದೆ. ಆದರೆ ಡೋರ ಕೋಳಿ, ಟೋಕೆ ಕೋಳಿ ಎಂಬ ಜಾತಿಯು ಪರಿಶಿಷ್ಟ ಪಂಗಡಗಳ ಜಾತಿಯ ಪಟ್ಟಿಯಲ್ಲಿರುವುದಿಲ್ಲ. |
| ಆ | ರಾಜ್ಯದಲ್ಲಿ ವಿಶೇಷವಾಗಿ ಉತ್ತರ ಕರ್ನಾಟದಲ್ಲಿ ಟೋಕೆ ಕೋಳಿ/ ಡೋರ ಕೋಲಿಯವರಿಗೆ ಜಾತಿ ಪ್ರಮಾಣ ಪತ್ರ ನೀಡಲು ತಹಶೀಲ್ದಾರ್. ಜಿಲ್ಲಾಧಿಕಾರಿಗಳು ಅಡ್ಡಿಪಡಿಸಿದ್ದು, ಜಾತಿ ಪ್ರಮಾಣ ಪತ್ರ ನೀಡದಿರಲು ಕಾರಣಗಳೇನು: | ಟೋಕೆ ಕೋಳಿ/ಡೋರಕೋಳಿ ಎಂಬ ಜಾತಿಯು ಪರಿಶಿಷ್ಟ ಪಂಗಡಗಳ ಜಾತಿ ಪಟ್ಟಿಯಲ್ಲಿ ಇಲ್ಲದೇ ಇರುವುದರಿಂದ ಅಂತಹ ಸಮುದಾಯದವರಿಗೆ ಪರಿಶಿಷ್ಟ ಪಂಗಡದ ಜಾತಿ ಪ್ರಮಾಣ ಪತ್ರ ನೀಡಲು ಅವಕಾಶವಿರುವುದಿಲ್ಲ. |
| ಇ | ಟೋಕೆ ಕೋಳಿ/ಡೋರ ಕೋಳಿಯ ಜಾತಿ ಪ್ರಮಾಣ ಪತ್ರ ತೆಗೆದುಕೊಂಡು ಸರ್ಕಾರಿ ಸೇವೆ ಮಾಡಿರುವ ಅಧಿಕಾರಿ /ನೌಕರರ ಪದೋನ್ನತಿ ಮತ್ತು ನಿವೃತ್ತಿ ಹೊಂದಿದವರ ಪಿಂಚಣಿಯನ್ನು ತಡ ಹಿಡಿಯಲು ಕಾರಣಗಳೇನು: | ಯಾವುದೇ ವ್ಯಕ್ತಿಯು ಪರಿಶಿಷ್ಟ ಪಂಗಡದ ಸುಳ್ಳು ಜಾತಿ ಪ್ರಮಾಣ ಪತ್ರವನ್ನು ಪಡೆದು ಸರ್ಕಾರಿ ನೌಕರಿ ಪಡೆದಿದ್ದಲ್ಲಿ ಮತ್ತು ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದಿರುವುದು ಸಾಭೀತಾಗಿದ್ದಲ್ಲಿ ಅಂತಹ ನೌಕರರ ಪದೋನ್ನತಿ ಮತ್ತು ನಿವೃತ್ತಿ ಹೊಂದಿದವರ ಪಿಂಚಣಿಯನ್ನು ತಡೆಹಿಡಿಯಲು ಅವಕಾಶವಿರುತ್ತದೆ. |
| ಈ | ಕೇಂದ್ರ ಸರ್ಕಾರದ ಸ್ಪಷ್ಟ ಆದೇಶಗಳಿದ್ದರು ಈ ಜಾತಿಯವರಿಗೆ ತೊಂದರೆ ಕೊಡುತ್ತಿರುವ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳದಿರಲು ಕಾರಣವೇನು: | ಮೇಲ್ಕಂಡ(ಅ)ದಲ್ಲಿರುವಂತೆ, ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿರುವ ಸಮುದಾಯಗಳಿಗೆ ಜಾತಿ ಪ್ರಮಾಣ ಪತ್ರವನ್ನು ಸಂಬಂದಿಸಿದ ತಹಶೀಲ್ದಾರವರು ನೀಡುತ್ತಾರೆ. ಆದರೆ ಪರಿಶಿಷ್ಟ ಪಂಗಡಗಳ ಪಟ್ಟಿಯಲ್ಲಿ ಇಲ್ಲದೇ ಇರುವ ಸಮುದಾಯಗಳಿಗೆ ಪರಿಶಿಷ್ಟ ಪಂಗಡಗಳ ಜಾತಿ ಪ್ರಮಾಣ ಪತ್ರವನ್ನು ನೀಡಲು ಅವಕಾಶವಿರುವುದಿಲ್ಲ. ಪರಿಶಿಷ್ಟ ಪಂಗಡ ಪಟ್ಟಿಯಲ್ಲಿರುವ ನೈಜ ವ್ಯಕ್ತಿಗಳಿಗೆ ತೊಂದರೆ ಕೊಡುತ್ತಿರುವ ಬಗ್ಗೆ ಖಚಿತವಾದ ದೂರು ಬಂದಲ್ಲಿ, ಅಂತಹ ಪ್ರಕರಣಗಳನ್ನು ಪರಿಶೀಲಿಸಿ ಸಂಬಂದಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು. |
| ಉ) | ಮಾನ್ಯ ಸರ್ವೋಚ್ಚ ನ್ಯಾಯಾಲಯವು 2000ರಲ್ಲಿ ಈಗಾಗಲೇ ಸೇವೆಯಲ್ಲಿರುವವರಿಗೆ ತೊಂದರೆ ನೀಡಬಾರದು ಎಂದು ತೀರ್ಪು ನೀಡಿದ್ದರು ಸಹ ಅದರಂತೆ ಸರ್ಕಾರ ಕ್ರಮವಹಿಸದಿರುವುದು ಸರಿಯೇ? | ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದನ್ವಯ ಆಯಾಯ ನೇಮಕಾತಿ ಸಕ್ಷಮ ಪ್ರಾಧಿಕಾರಿಗಳಿಗೆ ನಿಯಮಾನುಸಾರ ಪರಿಶೀಲಿಸಿ, ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ನಿರ್ದೇಶನ ನೀಡಲಾಗಿದೆ. |

ಸಕಇ/267/ಎಸ್‌ಟಿಪಿ /2023

(ಬಿ.ನಾಗೇಂದ್ರ)
ಪರಿಶಿಷ್ಟ ಪಂಗಡಗಳ ಕಲ್ಯಾಣ,
ಯುವ ಸಬಲೀಕರಣ ಹಾಗೂ ಕ್ರೀಡಾ ಸಚಿವರು